ಭಾನುವಾರ 28-09-2025 ಬೆಂಗಳೂರು ಬೆಲೆ: 5ರೂ, 4ಪಟಗಳು ಸಂಪುಟ 01-ಸಂಚಿಕೆ 64

Digital Varthe Kannada Daily Volume 01 - Issue 64 Sunday 28-09-2025 Price: 5/- Rs 2 Pages Bengalore

DIGITAL VARTHE

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

www.digitalvarthe.com
digitalvarthe@gmail.com

ಅಭಿಷೇಕ್ ಚಿಕ್ಕಮಾರನಹಳ್ಳಿ
ಸಂಪಾದಕರು

ಪುರುಷೋತ್ತಮ್ ಬಿ.ಹೆಚ್
ವ್ಯವಸ್ಥಾಪಕರು

RNI:KNKAN/25/A1348

ಕನ್ನಡ ದಿನಪತ್ರಿಕೆ

## ಮಹಿಳೆಯರ ರಕ್ಷಣೆಗೆ ಬಂದಿದೆ ರಾಣಿ ಚೆನ್ನಮ ಪಡೆ

ಬೆಂಗಳೂರು: ಮಹಿಳೆಯರು ಕಿರುಕುಳ, ದೌರ್ಜನ್ಯಕ್ಕೊಳಗಾದರೆ 112 ಗೆ ಕರೆ ಮಾಡಿದರೆ ತಕ್ಷಣ ರಾಣಿ ಚೆನ್ನಮ ಪಡೆ ನಿಮ ಸಹಾಯಕ್ಕೆ ಧಾವಿಸಲಿದೆ. ಈ ಪಡೆ ನಿನ್ನೆಯಿಂದ ಉತ್ತರ ವಿಭಾಗದಲ್ಲಿ ಕಾರ್ಯಾಚರಣೆ ನಡೆಸುತ್ತಿದ್ದು, ಒಬ್ಬರು ಮಹಿಳಾ ಇನ್?ಸಪೆಕ್ಟರ್, ನಾಲ್ವರು ಸಬ್‌ಇನ್ಸ್ ಪೆಕ್ಟರ್, 15 ಮಂದಿ ಸಿಬ್ಬಂದಿ ಸೇರಿ 20 ಮಂದಿ ತಂಡದಲ್ಲಿರುತ್ತಾರೆ.

ರಾಣಿ ಚೆನ್ನಮ ಪಡೆಯನ್ನು ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ಅವರು ನಿನ್ನೆ ಉದ್ಘಾಟನೆ ಮಾಡಿದ್ದು, ಈ ಪಡೆ ಬೆಳಗ್ಗೆ 9 ಗಂಟೆಯಿಂದ ರಾತ್ರಿ 9 ಗಂಟೆಯವರೆಗೆ ಗಸ್ತಿನಲ್ಲಿರಲಿದೆ.

ದಾರಿಯಲ್ಲಿ ಹೋಗುವ ಮಹಿಳೆಯರೊಂದಿಗೆ ಯಾರಾದರೂ ಅನುಚಿತವಾಗಿ ವರ್ತಿಸಿದರೆ, ಚುಡಾಯಿಸಿದರೆ, ಕಿರುಕುಳ ನೀಡಿದರೆ ಬಂಧನಕ್ಕೊಳಗಾಗುತ್ತೀರಿ ಎಚ್ಚರಿಕೆ.

ಈ ಪಡೆ ಮಹಿಳೆಯರ ರಕ್ಷಣೆ ಮಾತ್ರವಲ್ಲದೇ ಅವರಿಗೆ ಕಾನೂನು ಕು-ರಿತು ಜಾಗೃತಿ ಮೂಡಿಸಲಿದೆ ಹಾಗೂ ಸ್ವಯಂ ರಕ್ಷಣೆ ಬಗ್ಗೆ ಶಾಲಾ ಕಾಲೇಜು ಮಟ್ಟದಲ್ಲಿ ವಿದ್ಯಾರ್ಥಿನಿಯರಿಗೆ ತರಬೇತಿ ಕಾರ್ಯಾಗಾರ ನೀಡಲಿದೆ.

ಬಸ್ ನಿಲ್ದಾಣ, ಶಾಲಾ ಕಾಲೇಜುಗಳ ಸಮೀಪ ಸೇರಿದಂತೆ ಜನ ಸಂದಣಿ ಪ್ರದೇಶಗಳಲ್ಲಿ ಚೆನ್ನಮ ಪಡೆ ಗಸ್ತು ನಡೆಸಲಿದ್ದು, ತೊಂದರೆಗೊಳಗಾದ ಮಹಿಳೆಯರು ತಕ್ಷಣ 112 ಗೆ ಕರೆ ಮಾಡಿದರೆ, ಆ ಮಾಹಿತಿ ಚೆನ್ನಮ ಪಡೆಗೆ ರವಾನೆಯಾಗಲಿದ್ದು, ಆಗ ಕ್ಷಣಾರ್ಧದಲ್ಲಿ ನಿಮ ಸಹಾಯಕ್ಕೆ ಬರಲಿದೆ.



### ಅಧಿಕಾರದಲ್ಲಿರೋದು ಯಾರು ಎಂಬುದನ್ನು ಮರೆತಿದ್ದಾರೆ ಅನಿಸುತ್ತೆ

## ಗಲಭೆ ಕೋರರಿಗೆ ಯೋಗಿ ವಾರ್ನಿಂಗ್



ಲಖ್ನೋ: ಅವ್ಯವಸ್ಥೆಯನ್ನು ಸೃಷ್ಟಿಸಲು ಯಾರೇ ಪ್ರಯತ್ನಿಸಿದರೂ ಅಂಥವರನ್ನು ಸರ್ಕಾರ ಹತ್ತಿಕ್ಕುತ್ತದೆ. ಗಲಭೆಕೋರರು ಶಿಕ್ಷೆಯಿಂದ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ಮತ್ತೆ ಎಂದಿಗೂ ಅವ್ಯವಸ್ಥೆಯನ್ನು ಸೃಷ್ಟಿಸುವ ಬಗ್ಗೆ ಯೋಚಿಸದ ರೀತಿಯಲ್ಲಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಉತ್ತರಪ್ರದೇಶದ ಸಿಎಂ ಯೋಗಿ ಆದಿತ್ಯನಾಥ್ ಎಚ್ಚರಿಕೆ ಕೊಟ್ಟಿದ್ದಾರೆ.

ಬರೇಲಿ ಮತ್ತು ಮೌನಲ್ಲಿ ನಡೆದ ಹಿಂಸಾಚಾರದ ನಂತರ, ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಉನ್ನತ ಮಟ್ಟದ ಸಭೆ ನಡೆಸಿದ್ದು, ಹಬ್ಬದ ಸಮಯದಲ್ಲಿ ಬಿಗಿ ಭದ್ರತಾ ವ್ಯವಸ್ಥೆ ಮತ್ತು ರಾಜ್ಯದಲ್ಲಿ ಶಾಂತಿ ಕಾಪಾಡಲು ನಿರ್ದೇಶನಗಳನ್ನು ನೀಡಿದ್ದಾರೆ.

ದಸರಾ ಕೆಟ್ಟದ್ದರ ಮೇಲೆ ಒಳ್ಳೆಯತನದ ವಿಜಯವನ್ನು ಸಂಕೇತಿಸುತ್ತದೆ.

ಗಲಭೆಕೋರರ ವಿರುದ್ಧ ಕ್ರಮ ಕೈಗೊಳ್ಳುವ ಸಮಯ ಈಗ ಬಂದಿದೆ. ಮೆರವಣಿಗೆಗಳು ಮತ್ತು ಪ್ರದರ್ಶನಗಳ ಮೇಲೆ ಯಾವುದೇ ಗುಂಪು ದುಷ್ಕೃತ್ಯ ನಡೆಸಿದರೆ ಸಹಿಸುವುದಿಲ್ಲ ಎಂದು ಹೇಳುವ ಮೂಲಕ ಸಿಎಂ ಯೋಗಿ ಗಲಭೆಕೋರರಿಗೆ ಕಠಿಣ ಎಚ್ಚ-ರಿಕೆ ನೀಡಿದರು. ಬರೇಲಿಯ ಪರಿಸ್ಥಿತಿ ಪ್ರಸ್ತುತ ಸಂಪೂರ್ಣವಾಗಿ ನಿಯಂತ್ರಣದಲ್ಲಿದೆ.

ಐ ಲವ್ ಮುಹಮದ್ ಪೋಸ್ಟರ್ ವಿವಾದಕ್ಕೆ ಸಂಬಂಧಿಸಿದಂತೆ ಶುಕ್ರವಾರದ ಪ್ರಾರ್ಥನೆಯ ನಂತರ ಉತ್ತರಪ್ರದೇಶದ ಬರೇಲಿಯಲ್ಲಿ ಹಿಂಸಾಚಾರ ಭುಗಿಲೆದ್ದಿದ್ದು, ಕಾನ್ಪುರದಲ್ಲಿ ಪ್ರಾರಂಭವಾದ ಈ ವಿಷಯವು ಈಗ ಬರೇಲಿ ಮತ್ತು ಮೌ ಸೇರಿದಂತೆ ಇತರ ನಗರಗಳಿಗೂ ಹರಡಿದೆ.

ಘರ್ಷಣೆಯ ಸಮಯದಲ್ಲಿ, ಪೊಲೀಸರು ಲಾಠಿ ಚಾರ್ಜ್ ಮತ್ತು ಅಶ್ರುವಾಯು ಶೆಲ್‌ಗಳನ್ನು ಪ್ರಯೋಗಿಸಿದ್ದು, ಇದರಿಂದಾಗಿ ಜನಸಮೂಹವನ್ನು ಚದು-ರಿಸಲು ಕಾಲ್ತುಳಿತದಂತಹ ಪರಿಸ್ಥಿತಿ ನಿರ್ಮಾಣವಾಯಿತು.

ಪ್ರತಿಭಟನಾಕಾರರು ಗಾಳಿಯಲ್ಲಿ ಗುಂಡು ಹಾರಿಸಿದ್ದಾರೆ. ಕಲ್ಲು ತೂರಾಟದಲ್ಲಿ 20ಕ್ಕೂ ಹೆಚ್ಚು ಪೊಲೀಸರು ಗಾಯಗೊಂಡಿದ್ದಾರೆ. ಇಲ್ಲಿಯವರೆಗೆ ಬರೇಲಿ ಹಿಂಸಾಚಾರಕ್ಕೆ ಸಂಬಂಧಿಸಿದಂತೆ 30 ಗಲಭೆಕೋರರನ್ನು ಬಂಧಿಸಲಾಗಿದೆ. ಆದರೆ 50ಕ್ಕೂ ಹೆಚ್ಚು ಜನರು ಬಂಧನದಲ್ಲಿದ್ದು, ವಿಚಾರಣೆ ನಡೆಸಲಾಗುತ್ತಿದೆ. ಇತ್ತೇಹಾದ್-ಎ-ಮಿಲ್ಲತ್ ಕೌನ್ಸಿಲ್ (ಐಎಂಸಿ) ಮುಖ್ಯಸ್ಥ ಮೌಲಾನಾ ತೌಕೀರ್ ರಜಾ ಖಾನ್ ಅವರನ್ನು ಗೃಹಬಂಧನದಲ್ಲಿ ಇರಿಸಲಾಗಿದೆ.

ಕಾನ್ಪುರದಲ್ಲಿ ಆರಂಭವಾದ ಐ ಲವ್ ಮುಹಮದ್ ಪೋಸ್ಟರ್ ವಿವಾದವು ಈಗ ಬರೇಲಿ ಮತ್ತು ಮೌ ನಂತಹ ನಗರಗಳನ್ನು ತಲುಪಿದೆ. ಪ್ರಾಥ-ರ್ನೆಯ ನಂತರ, ರಜಾ ಅವರ ಕರೆಯ ಮೇರೆಗೆ ಬರೇಲಿಯ ಇಸ್ಲಾಮಿಯಾ ಮೈದಾನದ ಹೊರಗೆ ನೂರಾರು ಪ್ರತಿಭಟನಾಕಾರರು ಜಮಾಯಿಸಿದ್ದರು. ಅವರು ಐ ಲವ್ ಮುಹಮದ್ ಸಂದೇಶವನ್ನು ಬೆಂಬಲಿಸುವ ಬ್ಯಾನರ್‌ಗಳು ಮತ್ತು ಪೋಸ್ಟರ್‌ಗಳನ್ನು ಹಿಡಿದು ಘೋಷಣೆಗಳನ್ನು ಕೂಗುತ್ತಿದ್ದರು. ಪ್ರದೇಶದಲ್ಲಿ ಈಗಾಗಲೇ ಸೆಕ್ಷನ್ 144 ವಿಧಿಸಲಾಗಿತ್ತು. ಮಸೀದಿಯ ಹೊರಗೆ ಜಮಾಯಿಸಿದ್ದ ಜನಸಮೂಹವನ್ನು ಚದು-ರಿಸಲು ಪೊಲೀಸರು ಪ್ರಯತ್ನಿಸಿದರು.

ಬರೇಲಿಯಲ್ಲಿ ನಡೆದ ಹಿಂಸಾಚಾರವು ಐದು ದಿನಗಳ ಅವಧಿಯಲ್ಲಿ ಪೂರ್ವನಿಯೋಜಿತವಾಗಿದೆ ಎಂದು ತನಿಖೆಯಿಂದ ತಿಳಿದುಬಂದಿದೆ. ಪೊಲೀಸರು ಪ್ರಸ್ತುತ ಪಿತೂರಿಯಲ್ಲಿ ಭಾಗಿಯಾಗಿರುವ ಎಲ್ಲ ವ್ಯಕ್ತಿಗಳನ್ನು ಗುರುತಿಸುತ್ತಿದ್ದಾರೆ.

ಗಲಭೆಕೋರರು ಮತ್ತು ಅಶಾಂತಿಯಲ್ಲಿ ಭಾಗಿಯಾಗಿರುವ ಸಂಘಟಕರ ವಿರುದ್ಧ ರಾಷ್ಟ್ರೀಯ ಭದ್ರತಾ ಕಾಯ್ದೆ (ಎನ್‌ಎಸ್‌ಎ) ಅಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ಘೋಷಿಸಿದ್ದಾರೆ. ಪ್ರಮುಖ ಸಂಘಟಕರ ವಿರುದ್ಧ ಔಪಚಾರಿಕವಾಗಿ ಎನ್‌ಎಸ್-ಎಯನ್ನು ಅನ್ವಯಿಸಲು ಸಿದ್ಧತೆಗಳು ನಡೆಯುತ್ತಿವೆ.

ಹೆಚ್ಚುವರಿಯಾಗಿ, ಎಲ್ಲಾ ಶಂಕಿತ ಭಾಗವಹಿಸುವವರ ಕರೆ ವಿವರ ದಾಖಲೆಗಳನ್ನು ವಿಶ್ಲೇಷಿಸಲಾಗುತ್ತಿದೆ ಮತ್ತು ಘರ್ಷಣೆಗಳು ನಡೆದ ಪ್ರದೇಶಗಳ ಸಿಸಿಟಿವಿ ದೃಶ್ಯಾವಳಿಗಳ ಮೂಲಕ ಗಲಭೆಕೋರರನ್ನು ಗುರುತಿಸಲಾಗುತ್ತಿದೆ.

ತೌಕೀರ್ ರಝಾ ಪಾತ್ರ

ಬರೇಲಿ ಹಿಂಸಾಚಾರದಲ್ಲಿ ರಜಾ ಪ್ರಮುಖ ವ್ಯಕ್ತಿಯಾಗಿ ಹೊರಹೊಮಿದ್ದಾರೆ, ಪೊಲೀಸ್ ಮೂಲಗಳು ಅವರನ್ನು ಗಲಭೆಯ ಹಿಂದಿನ ಮಾಸ್ಟರ್ ಮೈಂಡ್ ಎಂದು ಗುರುತಿಸಿವೆ. ಗುರುವಾರ ರಾತ್ರಿಯಿಂದ ಅವರು ಸ್ನೇಹಿತನ ಮನೆಯಲ್ಲಿ ತಂಗಿದ್ದರು. ಪೊಲೀಸರು ರಜಾ ಅವರನ್ನು ವಿಚಾರಣೆಗಾಗಿ ಅಜ್ಞಾತ ಸ್ಥಳಕ್ಕೆ ಕರೆದೊಯ್ದಿದ್ದಾರೆ. ಮನೆಯಲ್ಲಿದ್ದ ಎಲ್ಲರ ಮೊಬೈಲ್ ಫೋನ್‌ಗಳನ್ನು ಸಹ ವಶಪಡಿಸಿಕೊಳ್ಳಲಾಗಿದೆ. ಹಿಂಸಾಚಾರದಲ್ಲಿ ಅವರ ಪಾತ್ರದ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಅವರ ಭಾಗಿಯಾಗಿರುವುದು ಸಾಬೀತಾದರೆ, ಅವರ ವಿರುದ್ಧ ಎಫ್‌ಐಆರ್‌ದಾಖಲಿಸಲಾಗಿದೆ.

### ದೆಹಲಿ-ಗುರುಗ್ರಾಮ ಎಕ್ಸ್ ಪ್ರೆಸ್‌ವೇನಲ್ಲಿ ಡಿವೈಡರ್‌ಗೆ

## ಕಾರು ಡಿಕ್ಕಿಯಾಗಿ ಐವರ ಸಾವು



ಗುರುಗ್ರಾಮ: ಇಂದು ಮುಂಜಾನೆ ದೆಹಲಿ-ಗುರುಗ್ರಾಮ ಎಕ್ಸ್ ಪ್ರೆಸ್‌ವೇಯಲ್ಲಿ ಥಾರ್ ವಾಹನವು ಡಿವೈಡರ್‌ಗೆ ಡಿಕ್ಕಿ ಹೊಡೆದ ಪರಿಣಾಮ ಐವರು ಸಾವನ್ನಪ್ಪಿದ್ದು, ಒಬ್ಬ ವ್ಯಕ್ತಿ ಗಾಯಗೊಂಡಿದ್ದಾರೆ. ಮೃತರು ಮತ್ತು ಗಾಯಾಳುಗಳನ್ನು ಇನ್ನೂ ಗುರುತಿಸಲಾಗಿಲ್ಲ ದೆಹಲಿ-ಗುರುಗ್ರಾಮ ಎಕ್ಸ್ ಪ್ರೆಸ್ ವೇಯ ನಿರ್ಗಮನ ಸಂಖ್ಯೆ 9 ರಲ್ಲಿ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ವೇಗವಾಗಿ ಬಂದ ವಾಹನದ ಚಾಲಕ ಸಮತೋಲನ ಕಳೆದುಕೊಂಡು ನೇರವಾಗಿ ಡಿವೈಡರ್‌ಗೆ ಡಿಕ್ಕಿ ಹೊಡೆದಿದ್ದಾನೆ.ಮೂರು ಮಹಿಳೆಯರು ಮತ್ತು ಇಬ್ಬರು ಪುರುಷರು ಸೇ-ರಿದಂತೆ ಐದು ಜನರು ಸ್ಥಳದಲ್ಲೇ ಸಾವನ್ನಪ್ಪಿದರು, ಒಬ್ಬ ವ್ಯಕ್ತಿ ಗಂಭೀರವಾಗಿ ಗಾಯಗೊಂಡು ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ ಎಂದು ಅವರು ಹೇಳಿದರು.

ಪೊಲೀಸರ ಪ್ರಕಾರ, ಎಲ್ಲಾ ಆರು ಪ್ರಯಾಣಿಕರು ಉತ್ತರ ಪ್ರದೇಶದಿಂದ ಗುರುಗ್ರಾಮಕ್ಕೆ ಕೆಲಸದ ನಿಮಿತ್ತ ಬಂದಿದ್ದರು.ಮಾಹಿತಿ ಪಡೆದ ನಂತರ, ಸೆಕ್ಟರ್ 40 ಪೊಲೀಸ್ ಠಾಣೆಯ ಪೊಲೀಸ್ ತಂಡ ಸ್ಥಳಕ್ಕೆ ತಲುಪಿ ಆರು ಜನರನ್ನು ಆಸ್ಪತ್ರೆಗೆ ಸಾಗಿಸಿತು, ಅಲ್ಲಿ ವೈದ್ಯರು ಐವರು ಮೃತಪಟ್ಟಿದ್ದಾರೆ ಎಂದು ಘೋಷಿಸಿದರು.

ಆದರೆ ಒಬ್ಬರು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಅವರು ಹೇಳಿದರು.

ಮೃತರು ಮತ್ತು ಗಾಯಗೊಂಡವರನ್ನು ಇನ್ನೂ ಗುರುತಿಸಲಾಗಿಲ್ಲ, ಆದರೆ ಥಾರ್ ಉತ್ತರ ಪ್ರದೇಶದ ನೋಂದಣಿ ಸಂಖ್ಯೆಯನ್ನು ಹೊಂದಿದೆ. ನಾವು ಈ ಬಗ್ಗೆ ತನಿಖೆ ನಡೆಸುತ್ತಿದ್ದೇವೆ ಎಂದು ಗುರುಗ್ರಾಮ್ ಪೊಲೀಸ್ ವಕ್ತಾರರು ತಿಳಿಸಿದ್ದಾರೆ.

### ಗ್ರೇಟರ್ ಬೆಂಗಳೂರು ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆ

## ಹಿನ್ನೆಲೆಯಲ್ಲಿ ಬಿಜೆಪಿಯ ಮಹತ್ವದ ಕೋರ್ ಕಮಿಟಿ ಸಭೆ

ಬೆಂಗಳೂರು: ಮುಂಬರುವ ಜಿಬಿಎ (ಗ್ರೇಟರ್ ಬೆಂಗಳೂರು ಅಥಾರಟಿ ) ಸ್ಥಳೀಯ ಸಂಸ್ಥೆಗಳ ಚುನಾವಣೆ ಸೇರಿದಂತೆ ರಾಜ್ಯ ಸರ್ಕಾರದ ವಿರುದ್ಧ ಹೋರಾಟ ನಡೆಸುವ ಕುರಿತು ಕೈಗೊಳ್ಳಬೇಕಾದ ಕಾರ್ಯತಂತ್ರಗಳ ಬಗ್ಗೆ ಸಂಜೆ ಬಿಜೆಪಿಯ ಮಹತ್ವದ ಕೋರ್ ಕಮಿಟಿ ಸಭೆ ನಡೆಯಲಿದೆ.

ಮಲ್ಲೇಶ್ವರದಲ್ಲಿರುವ ಬಿಜೆಪಿ ಕಚೇರಿಯಲ್ಲಿ ನಡೆಯಲಿರುವ ಕೋರ್ ಕಮಿಟಿ ಸಭೆಗೆ ರಾಜ್ಯ ಉಸ್ತುವಾರಿ ರಾಧಾ ಮೋಹನ್ ಅಗರ್‌ವಾಲ್, ಬಿಜೆಪಿ ರಾಷ್ಟ್ರೀಯ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ, ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿ-ಜಯೇಂದ್ರ, ಪ್ರತಿಪಕ್ಷದ ನಾಯಕ ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ, ಸಂಸದರು, ಶಾಸಕರು, ವಿಧಾನಪರಿಷತ್ ಸದಸ್ಯರು ಹಾಗೂ ಪದಾಧಿಕಾ-ರಿಗಳು ಭಾಗಿಯಾಗುವರು. ಮುಂಬರುವ ಜಿಬಿಎ ಚುನಾವಣೆಯಲ್ಲಿ ಪಕ್ಷವನ್ನು ಬಲಪಡಿಸಿ ಐದು ಪಾಲಿಕೆಗಳಲ್ಲೂ ಗೆಲ್ಲಲೇಬೇಕಾದ ರೂಪಿಸಲಿದೆ.

ಕಳೆದ ಲೋಕಸಭೆ ಚುನಾವಣೆಯಲ್ಲಿ ಬೆಂಗಳೂರು ದಕ್ಷಿಣ, ಬೆಂಗಳೂರು ಉತ್ತರ, ಬೆಂಗಳೂರು ಸೆಂಟ್ರಲ್, ಬೆಂಗಳೂರು ಗ್ರಾಮಾಂತರ ಹಾಗೂ ಬೆಂಗಳೂರಿಗೆ ಹೊಂದುಕೊಂಡಿರುವ ಚಿಕ್ಕಬಳ್ಳಾಪುರ ಸೇರಿದಂತೆ ಐದು ಕ್ಷೇತ್ರಗಳನ್ನು ಬಿಜೆಪಿ ತನ್ನ ಬುಟ್ಟಿಗೆ ಹಾಕಿಕೊಂಡಿತ್ತು.ವಿಧಾನಸಭೆ ಮತ್ತು ಲೋಕಸಭೆ ಚುನಾವಣೆಯಲ್ಲಿ ಬೆಂಗಳೂರು ಮತದಾರರು ಬಿಜೆಪಿಗೆ ಒಲವು ತೋರಿರುವುದರಿಂದ ಮೊದಲ ಬಾರಿಗೆ ಬಿಬಿಎಂಪಿ ವಿಭಜನೆಗೊಂಡು ಐದು ಮಹಾನಗರ ಪಾಲಿಕೆಯಾಗಿ ಗ್ರೇಟರ್ ಬೆಂಗಳೂರು ಅಥಾರಟಿ ಎಂಬ ಹೆಸರಿನೊಂದಿಗೆ ಅಸ್ತಿತ್ವಕ್ಕೆ ಬಂದಿದೆ. ಐದಕ್ಕೆ 5 ಪಾಲಿಕೆಗಳನ್ನು ಗೆಲ್ಲಲೇಬೇಕೆಂದು ಪಣ ತೊಟ್ಟಿರುವ ಬಿಜೆಪಿ ಸರ್ಕಾರದ ವೈಫಲ್ಯಗಳನ್ನು ನಗರದ ಜನತೆಗೆ ಮನವರಿಕೆ ಮಾಡಿಕೊಡಲಿದ್ದಾರೆ.



ಬೆಂಗಳೂರಿನಲ್ಲಿ ಹದಗೆಟ್ಟಿರುವ ರಸ್ತೆಗಳು, ಮುಚ್ಚದೇ ಇರುವ ಗುಂಡಿಗಳು, ಹೆಚ್ಚುತ್ತಿರುವ ಅಪಘಾತ, ಬೆಂಗಳೂರು ಬಿಟ್ಟು ಕೆಲವು ಬಹುರಾಷ್ಟ್ರೀಯ ಕಂಪನಿಗಳು ಹೊರರಾಜ್ಯಕ್ಕೆ ಹೋಗಲು ಮುಂದಾಗಿರುವುದು, ಹದಗೆಟ್ಟಿರುವ ಕಾನೂನು ಸುವ್ಯವಸ್ಥೆ, ಹೆಚ್ಚುತ್ತಿರುವ ಅಪರಾಧ ಪ್ರಕರಣಗಳು ಹೀಗೆ ಸರ್ಕಾರದ ವೈಫಲ್ಯಗಳನ್ನು ಜನತೆಯ ಮುಂದಿಡಲಿದೆ.

ಇನ್ನು ಕೋರ್ ಕಮಿಟಿ ಸಭೆಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯ್ತಿ ಚುನಾವಣೆಗಳ ಬಗ್ಗೆಯೂ ಚರ್ಚೆ ನಡೆಯಲಿದೆ. ಹಲವಾರು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ಚುನಾವಣೆಯನ್ನು ಡಿಸೆಂಬರ್ ನಂತರ ನಡೆಸಲು ಸರ್ಕಾರ ಉದ್ದೇಶಿಸಿದೆ.ಇದೇ ಸಂದರ್ಭದಲ್ಲಿ ಚುನಾವಣೆ ಎದುರಾದರೆ ಹೆಚ್ಚಿನ ಸ್ಥಾನ ಗಳಿಸಲು ಕೈಗೊಳ್ಳಬೇಕಾದ ಕಾರ್ಯತಂತ್ರಗಳ ಬಗ್ಗೆ ಪ್ರಮುಖರು ಚರ್ಚೆ ನಡೆಸಲಿದ್ದಾರೆ.

ಸರ್ಕಾರ ಪ್ರತಿದಿನ ಒಂದಿಲ್ಲೊಂದು ವಿವಾದದಲ್ಲಿ ಸಿಲುಕುತ್ತಿದ್ದು, ಜಾತಿ ಜನಗಣತಿಯಿಂದ ಉಂಟಾಗಿರುವ ಗೊಂದಲ, ಹಿಂದೂ ಧರ್ಮದ ಉಪಜಾತಿಗಳ ಜೊತೆ ಕ್ರಿಶ್ಚಿಯನ್ ಧರ್ಮದ ಸೇರ್ಪಡೆ, ಸರ್ಕಾರದ ಮೇಲೆ ಕೇಳಿ ಬರುತ್ತಿರುವ ಹಗರಣಗಳು, ಅಭಿವೃದ್ಧಿ ಕುಂಠಿತ ಹೀಗೆ ಸಾಲು ಸಾಲು ವೈಫಲ್ಯಗಳ ಬಗ್ಗೆಯೂ ಚರ್ಚೆ ನಡೆಯಲಿದೆ ಎಂದು ಗೊತ್ತಾಗಲಿದೆ.

# ಬೆಂಗಳೂರಲ್ಲಿ ಸಿಎಂ ಸಿದ್ದರಾಮಯ್ಯ ಸಿಟಿರೌಂಡ್ಸ್ ರಸ್ತೆಗಳ ಪರಿಶೀಲನೆ

ಬೆಂಗಳೂರು: ಮಳೆಗಾಲದಲ್ಲಿ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಇವುಗಳನ್ನು ದುರಸ್ತಿಗೊಳಿಸಿ, ರಸ್ತೆಗಳನ್ನು ಸಂಚಾರ ಯೋಗ್ಯವಾಗಿಸಲು ಒಂದು ತಿಂಗಳ ಕಾಲಾವಕಾಶವನ್ನು ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಇಂದು ಬೆಂಗಳೂರು ನಗರ ರಸ್ತೆಗಳ ಪರಿಸ್ಥಿತಿ ಅರಿಯಲು ಸಿಟಿರೌಂಡ್ಸ್ ನಡೆಸಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿದರು.

ನಗರದ ರಸ್ತೆಗಳಲ್ಲಿರುವ ಗುಂಡಿಗಳನ್ನು ಮುಚ್ಚಲು ಸೂಚನೆ ನೀಡಲಾಗಿದ್ದು, ಈ ಕಾರ್ಯ ಗುಣಮಟ್ಟದಿಂದ ಕೂಡಿರಬೇಕು. ರಸ್ತೆ ದುರಸ್ತಿ ಕಾರ್ಯ ಸರಿಯಿಲ್ಲದ ಕಾರಣ, ಸಂಬಂಧಪಟ್ಟ ಎಕ್ಸಿಕ್ಯೂಟಿವ್ ಇಂಜಿನಿಯರ್ ನ್ನು ಅಮಾನತ್ತುಗೊಳಿಸಲಾಗಿದೆ. ಗುಂಡಿ ಮುಚ್ಚಲು ಕೇವಲ ಜಲ್ಲಿ ಹಾಕಿ ಟಾರ್ ಹಾಕದೇ ಹಾಗೇ ಬಿಟ್ಟಿದ್ದ ಕಾರಣ, ಅವರ ಮೇಲೆ ಕ್ರಮ ಕೈಗೊಳ್ಳಲಾಗಿದೆ.






ಹೆಣ್ಣೂರು ರಸ್ತೆ ವೈಟ್ ಟಾಪಿಂಗ್ ಕಾಮಗಾರಿ ನಡೆಯುತ್ತಿದ್ದು, ರಸ್ತೆಯ ನಿರ್ವಹಣೆಯನ್ನು ಸಂಬಂಧಪಟ್ಟ ಗುತ್ತಿಗೆದಾರರ ಜವಾಬ್ದಾರಿಯಾಗಿರುತ್ತದೆ. 5 ಕಿ.ಮೀ. ರಸ್ತೆ ಕಾಮಗಾರಿಯನ್ನು ಕಿ.ಮೀ. ಒಂದಕ್ಕೆ 13 ಕೋಟಿಗಳನ್ನು ಸರ್ಕಾರ ವ್ಯಯಿಸುತ್ತಿದೆ. ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಲು ಒಂದು ತಿಂಗಳ ಕಾಲಾವಕಾಶವನ್ನು ನೀಡಲಾಗಿದೆ. ರಸ್ತೆಗಳಲ್ಲಿ ಯಾವುದೇ ಗುಂಡಿಗಳಿಲ್ಲದಂತೆ ಮುಚ್ಚಬೇಕೆಂದು ಸೂಚನೆ ನೀಡಲಾಗಿದೆ ಎಂದರು.

ಬಿಜೆಪಿ ಅವಧಿಯಲ್ಲಿ ರಸ್ತೆ ದುರಸ್ತಿ ನಡೆಯಲಿಲ್ಲ

ರಸ್ತೆ ಪರಿಶೀಲನೆ ನಡೆಯಲಿದೆಯೆಂಬ ಕಾರಣಕ್ಕೆ ರಸ್ತೆ ಗುಂಡಿಗಳನ್ನು ಮುಚ್ಚಲಾಗಿದ್ದು, ಗುಂಡಿಗಳಿಂದಾಗಿ ರಸ್ತೆ ಅಪಘಾತಗಳು ಸಂಭವಿಸುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ರಸ್ತೆ ಗುಂಡಿಗಳಿರುವುದು ನಿಜ. ಆದರೆ ಬಿಜೆಪಿ ಸರ್ಕಾರದ ಅವಧಿಯಲ್ಲಿ ಈ ರಸ್ತೆ ಗುಂಡಿಗಳ ದುರಸ್ತಿ ನಡೆದಿದ್ದರೆ, ರಸ್ತೆಗಳು ಇಂತಹ ಪರಿಸ್ಥಿತಿಗೆ ತಲುಪುತ್ತಿರಲಿಲ್ಲ. ಮಳೆಗಾಲ ಮುಗಿಯುವುದರೊಳಗೆ ರಸ್ತೆ ಗುಂಡಿಗಳನ್ನು ಮುಚ್ಚಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ನ್ಯಾಯಾಲಯದ ನಿರ್ದೇಶನದಂತೆ ಸಮೀಕ್ಷೆ

ಸಮೀಕ್ಷೆಯಲ್ಲಿ ಯಾರೂ ಭಾಗವಹಿಸಬಾರದೆಂದು ಸಂಸದ ತೇಜಸ್ವಿ ಸೂರ್ಯ ಅವರು ಕರೆನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಸಮೀಕ್ಷೆಯನ್ನು ತಡೆಯಬೇಕೆಂದು ನ್ಯಾಯಾಲಯಕ್ಕೆ ಹೋಗಲಾಗಿತ್ತು. ನ್ಯಾಯಾಲಯ ನೀಡಿರುವ ನಿರ್ದೇಶನಗಳಂತೆ ಸಮೀಕ್ಷೆಯನ್ನು ನಡೆಸಲಾಗುವುದು. ಈಗಾಗಲೇ ಸುಮಾರು 10 ಲಕ್ಷ ಜನರ ಸಮೀಕ್ಷೆ ಪೂರ್ಣಗೊಂಡಿದೆ ಎಂದರು.

ತ್ಯಾಜದ ಸಮರ್ಪಕ ನಿರ್ವಹಣೆಗೆ ಸೂಚನೆ

ತ್ಯಾಜ್ಯ ನಿರ್ವಹಣೆ ಸಮಸ್ಯೆ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ, ರಸ್ತೆಗಳ ಕೆಲವೆಡೆಗಳಲ್ಲಿ ತ್ಯಾಜ್ಯವನ್ನು ನಿರ್ವಹಿಸದೇ ಹಾಗೇ ಬಿಟ್ಟಿದ್ದು, ತ್ಯಾಜ್ಯವನ್ನು ತ್ವರಿತವಾಗಿ ತೆಗೆಯಬೇಕೆಂದು ಸೂಚನೆ ನೀಡಲಾಗಿದ್ದು,, ಇಲ್ಲವಾದಲ್ಲಿ ಸಂಬಂಧಪಟ್ಟ ಕಮೀಷನರ್ ಹಾಗೂ ಇಂಜಿನಿಯರ್ ಗಳ ಮೇಲೆ ಕ್ರಮ ಕೈಗೊಳ್ಳಲಾಗುವುದು ಎಂದರು.

# ಹಿಂಸಾಚಾರ ಪೀಡಿತ ಲಡಾಖ್‌ನಲ್ಲಿ ಕರ್ಫ್ಯೂ ಮುಂದುವರಿಕೆ

ಲೇಹ್: ಹಿಂಸಾಚಾರ ಪೀಡಿತ ಲಡಾಖ್‌ನಲ್ಲಿ ಇಂದೂ ಕೂಡ ಕರ್ಫ್ಯೂ ಜಾರಿಯಲ್ಲಿದೆ. ಹವಾಮಾನ ಕಾರ್ಯಕರ್ತ ಸೋನಮ್ ವಾಂಗ್‌ಚುಕ್ ಅವರನ್ನು ರಾಷ್ಟ್ರೀಯ ಭದ್ರತಾ ಕಾಯ್ದೆ (ಎನ್‌ಎಸ್‌ಎ) ಅಡಿಯಲ್ಲಿ ಹಿಂದಿನ ದಿನ ಬಂಧಿಸಿದ ನಂತರ ಪೊಲೀಸರು ಮತ್ತು ಅರೆಸೈನಿಕ ಪಡೆಗಳು ಗಸ್ತು ಮತ್ತು ತಪಾಸಣೆಯನ್ನು ತೀವ್ರಗೊಳಿಸಿವೆ ಹಾಗೂ ಕಳೆದ ಮೂರು ದಿನಗಳಿಂದ ಇರುವ ಕರ್ಫ್ಯೂ ಮುಂದುವರೆಸಿದ್ದಾರೆ.



ಲೆಫ್ಟಿನೆಂಟ್ ಗವರ್ನರ್ ನೇತೃತ್ವದ ಆಡಳಿತವು ವಾಂಗ್‌ಚುಕ್ ಬಂಧನವನ್ನು ಸಮರ್ಥಿಸಿಕೊಂಡಿದೆ ಮತ್ತು ನೇಪಾಳ ಆಂದೋಲನ ಮತ್ತು ಅರಬ್ ವಸಂತವನ್ನು ಉಲ್ಲೇಖಿಸಿ ಅವರ ಪ್ರಚೋದನಕಾರಿ ಭಾಷಣಗಳ ಸರಣಿಯು ಬುಧವಾರದ ಹಿಂಸಾಚಾರಕ್ಕೆ ಕಾರಣವಾಯಿತು ಮತ್ತು ನಾಲ್ವರು ಸಾವನ್ನಪ್ಪಿದರು ಮತ್ತು ಹಲವಾರು ಇತರರು ಗಾಯಗೊಂಡರು ಎಂದು ಹೇಳಿದೆ. ಶಾಂತಿ ಪ್ರಿಯ ಲೇಹ್ ಪಟ್ಟಣದಲ್ಲಿ ಸಾಮಾನ್ಯ ಸ್ಥಿತಿ ಪುನಃಸ್ಥಾಪಿಸಲು ಮತ್ತು ಸಾರ್ವಜನಿಕ ಸುವ್ಯವಸ್ಥೆ ನಿರ್ವಹಣೆಗೆ ಪೂರ್ವಾಗ್ರಹ ಪೀಡಿತವಾಗಿ ಅವರು ಮುಂದೆ ಈ ರೀತಿ ವರ್ತಿಸುವುದನ್ನು ತಡೆಯಲು ವಾಂಗ್‌ಚುಕ್ ಬಂಧನವು ಮುಖ್ಯ ಎಂದು ಅದು ಹೇಳಿದೆ. ಕಳೆದ 24 ಗಂಟೆಗಳಲ್ಲಿ ಲಡಾಖ್‌ನಲ್ಲಿ ಎಲ್ಲಿಂದಲಾದರೂ ಯಾವುದೇ ಅಹಿತಕರ ಘಟನೆ ವರದಿಯಾಗಿಲ್ಲ. ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳಲು ನಿರ್ಬಂಧಗಳು ಜಾರಿಯಲ್ಲಿವೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ಲೆಫ್ಟಿನೆಂಟ್ ಗವರ್ನರ್ ಕವಿಂದರ್ ಗುಪ್ತಾ ಶೀಘ್ರದಲ್ಲೇ ರಾಜಭವನದಲ್ಲಿ ಉನ್ನತ ಮಟ್ಟದ ಭದ್ರತಾ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಲಿದ್ದು, ಕರ್ಫ್ಯೂ ಸಡಿಲಿಸುವ ಯಾವುದೇ ನಿರ್ಧಾರವನ್ನು ಅದಕ್ಕೆ ತಕ್ಕಂತೆ ತೆಗೆದುಕೊಳ್ಳಲಾಗುವುದು ಎಂದು ಅವರು ಹೇಳಿದರು.

ಸೂಕ್ಷ್ಮ ಪ್ರದೇಶಗಳಲ್ಲಿ ಪೊಲೀಸರು ಮತ್ತು ಅರೆಸೈನಿಕ ಪಡೆಗಳಿಂದ ಗಸ್ತು ಮತ್ತು ತಪಾಸಣೆ ತೀವ್ರಗೊಳಿಸಲಾಗಿದ್ದು, ಹಿಂಸಾಚಾರಕ್ಕೆ ಪ್ರಚೋದನೆ ನೀಡಿದ ಕೌನ್ಸಿಲರ್ ಸೇರಿದಂತೆ ಪರಾರಿಯಾಗಿರುವ ಗಲಭೆಕೋರರನ್ನು ಬಂಧಿಸಲು ದಾಳಿಗಳು ನಡೆಯುತ್ತಿವೆ ಎಂದು ಅಧಿಕಾರಿ ಹೇಳಿದರು. ಘರ್ಷಣೆಯ ನಂತರ 50 ಕ್ಕೂ ಹೆಚ್ಚು ಜನರನ್ನು ಬಂಧಿಸಲಾಗಿದೆ, ಆದರೆ ಕಾರ್ಗಿಲ್ ಸೇರಿದಂತೆ ಕೇಂದ್ರಾಡಳಿತ ಪ್ರದೇಶದ ಇತರ ಪ್ರಮುಖ ಪಟ್ಟಣಗಳಲ್ಲಿ ಐದು ಅಥವಾ ಅದಕ್ಕಿಂತ ಹೆಚ್ಚು ಜನರು ಸೇರುವುದನ್ನು ನಿಷೇಧಿಸುವ ನಿಷೇಧಿತ ಆದೇಶಗಳ ಅಡಿಯಲ್ಲಿ ಕಟ್ಟುನಿಟ್ಟಿನ ನಿರ್ಬಂಧಗಳು ಜಾರಿಯಲ್ಲಿವೆ.ಲಡಾಖ್‌ನ ಮಾಹಿತಿ ಮತ್ತು ಸಾರ್ವಜನಿಕ ಸಂಪರ್ಕ ನಿರ್ದೇಶನಾಲಯ (ಡಿಐಪಿಆರ್) ತಡರಾತ್ರಿ ಹೇಳಿಕೆಯಲ್ಲಿ ಹೀಗೆ ಹೇಳಿದೆ: ವಾಂಗ್‌ಚುಕ್ ರಾಜ್ಯದ ಭದ್ರತೆಗೆ ಹಾನಿಕರ ಮತ್ತು ಶಾಂತಿ ಮತ್ತು ಸಾರ್ವಜನಿಕ ಸುವ್ಯವಸ್ಥೆ ನಿರ್ವಹಣೆ ಮತ್ತು ಸಮುದಾಯಕ್ಕೆ ಅಗತ್ಯವಾದ ಸೇವೆಗಳಿಗೆ ಹಾನಿಕಾರಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವುದು ಪದೇ ಪದೇ ಕಂಡುಬಂದಿದೆ.

ಉನ್ನತ ಅಧಿಕಾರ ಸಮಿತಿಯ ಸಭೆಯ ಬಗ್ಗೆ ಸರ್ಕಾರದಿಂದ ಸ್ಪಷ್ಟ ಸಂವಹನ ಮತ್ತು ಮುಂದೆ ಪೂರ್ವ ಸಭೆಗಳನ್ನು ನೀಡುವ ಪ್ರಸ್ತಾಪದ ಹೊರತಾಗಿಯೂ, ವಾಂಗ್ಚುಕ್ ತನ್ನ ಗುಪ್ತ ಉದ್ದೇಶದಿಂದ ಸೆಪ್ಟೆಂಬರ್ 10 ರಿಂದ ಪಟ್ಟಣದಲ್ಲಿ ಉಪವಾಸ ಸತ್ಯಾಗ್ರಹವನ್ನು ಮುಂದುವರೆಸಿದ್ದಾನೆ ಎಂದು ಅದು ಹೇಳಿದೆ. ಅವರ ಪ್ರಚೋದನಕಾರಿ ಭಾಷಣಗಳ ಸರಣಿ, ನೇಪಾಳ ಚಳವಳಿಗಳು, ಅರಬ್ ವಸಂತ ಇತ್ಯಾದಿಗಳ ಉಲ್ಲೇಖಗಳು ಮತ್ತು ದಾರಿತಪ್ಪಿಸುವ ವೀಡಿಯೊಗಳು ಸೆಪ್ಟೆಂಬರ್ 24 ರಂದು ಲೇಹ್‌ನಲ್ಲಿ ಹಿಂಸಾತ್ಮಕ ಪ್ರತಿಭಟನೆಗಳಿಗೆ ಕಾರಣವಾಯಿತು, ಅಲ್ಲಿ ಸಂಸ್ಥೆಗಳು, ಕಟ್ಟಡಗಳು ಮತ್ತು ವಾಹನಗಳನ್ನು ಸುಟ್ಟುಹಾಕಲಾಯಿತು, ಮತ್ತು ಅದರ ಪರಿಣಾಮವಾಗಿ, ಪೊಲೀಸ್ ಸಿಬ್ಬಂದಿಯ ಮೇಲೆ ದಾಳಿ ಮಾಡಲಾಯಿತು, ಇದು ನಾಲ್ವರು ವ್ಯಕ್ತಿಗಳ ದುರದೃಷ್ಟಕರ ಸಾವಿಗೆ ಕಾರಣವಾಯಿತು.ಸರ್ಕಾರದೊಂದಿಗಿನ ಮಾತುಕತೆಯನ್ನು ಅದೇ ಕಾರ್ಯಸೂಚಿಯಲ್ಲಿ ಪುನರಾರಂಭಿಸಿದಾಗ ಅವರು ಉಪವಾಸ ಸತ್ಯಾಗ್ರಹವನ್ನು ರದ್ದುಗೊಳಿಸುವ ಮೂಲಕ ತಮ್ಮ ವೈಯಕ್ತಿಕ ಮತ್ತು ರಾಜಕೀಯ ಮಹತ್ವಾಕಾಂಕ್ಷೆಗಳನ್ನು ಮೀರಿ ಮೇಲೇರಲು ಸಾಧ್ಯವಿದ್ದರೆ ಇಡೀ ಘಟನೆಯನ್ನು ತಪ್ಪಿಸಬಹುದಿತ್ತು ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ.

# ಅಡುಗೆ ಅನಿಲ ಸೋರಿಕೆಯಿಂದ ಸ್ಫೋಟ, 8 ಮಂದಿಗೆ ಗಾಯ



ಹೊಸಪೇಟೆ: ವಕೀಲರೊಬ್ಬರ ಮನೆಯಲ್ಲಿ ಅನಿಲ ಸೋರಿಕೆಯಿಂದ ಸಂಭವಿಸಿದ ಸ್ಫೋಟದಲ್ಲಿ 8 ಮಂದಿ ಗಾಯಗೊಂಡಿರುವ ಘಟನೆ ತಾಲ್ಲೂಕಿನ ಗಾದಿಗನೂರಿನಲ್ಲಿ ಮುಂಜಾನೆ ನಡೆದಿದೆ. ಹೊಸಪೇಟೆ–ಬಳ್ಳಾರಿ ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲೇ ಇರುವ ವಕೀಲ ಹಾಲಪ್ಪ ಅವರಿಗೆ ಸೇರಿದ ಮನೆಯಲ್ಲಿ ಇಂದು ಮುಂಜಾನೆ 5.15ರ ಸುಮಾರಿಗೆ ಸ್ಫೋಟ ಸಂಭವಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಗಾಯಾಳುಗಳನ್ನು ತೋರಣಗಲ್‌ನ ಸಂಜೀವಿನಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಕವಿತಾ ಎಂಬುವವರ ಸ್ಥಿತಿ ಗಂಭೀರವಾಗಿದ್ದು, ಉಳಿದವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎಂದು ಗ್ರಾಮೀಣ ಠಾಣೆ ಪೊಲೀಸರು ತಿಳಿಸಿದ್ದಾರೆ. ಸ್ಫೋಟದ ತೀವ್ರತೆಗೆ ಮನೆಯ ಗೋಡೆ ಕುಸಿದಿದೆ.ಬೆಳಿಗ್ಗೆ ಸ್ಟವ್ ಹಚ್ಚಲು ಕವಿತಾ ಯತ್ನಿಸಿದಾಗ ಏಕಾ ಏಕಿ ಬೆಂಕಿ ಹತ್ತಿಕೊಂಡಿತು. ಸ್ಫೋಟದಿಂದ ಮನೆ ಶೇ 50ರಷ್ಟು ಧ್ವಂಸವಾಗಿದೆ.

ಕವಿತಾ ಗೆ ತೀವ್ರ ಸುಟ್ಟ ಗಾಯವಾಗಿದ್ದು, ಹಾಲಪ್ಪ, ಮೈಲಾರಪ್ಪ, ಗಂಗಮ್ಮ, ಮಲ್ಲಮ ಮತ್ತು ಇಬ್ಬರು ಮಕ್ಕಳು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ವಿಷಯ ತಿಳಿದ ತಕ್ಷಣ ಹೊಸಪೇಟೆಯಿಂದ ಅಗ್ನಿಶಾಮಕ ಸಿಬ್ಬಂದಿ ಮತ್ತು ಪೊಲೀಸರು ಧಾವಿಸಿ ಬೆಂಕಿ ನಂದಿಸಿದ್ದಾರೆ. ಅಕ್ಕಮಕ್ಕದ ಮನೆಯವರು ಘಟನೆಯಿಂದ ಭಯ ಭೀತರಾಗಿದ್ದಾರೆ.

# ಪ್ರವಾಹ ಪೀಡಿತ ಪ್ರದೇಶಗಳಿಗೆ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಭೇಟಿ

ಗುಲ್ಬರ್ಗ: ಮಳೆ ಹಾಗೂ ಪ್ರವಾಹ ಪೀಡಿತ ಚಿತ್ತಾಪುರ ತಾಲೂಕಿನ ಹಳೆ ಹೆಬ್ಬಾಳ ಗ್ರಾಮಕ್ಕೆ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಇಂದು ಭೇಟಿ ನೀಡಿ ಪರಿಸ್ಥಿತಿ ಅವಲೋಕಿಸಿದರು.ಈ ಸಂದರ್ಭದಲ್ಲಿ ಮಳೆಯಿಂದ ಬಿದ್ದ ಮನೆಯನ್ನು ಪರಿಶೀಲಿಸಿ ಹಾನಿಗೊಳಗಾದ ಮನೆಗಳ ಸರ್ವೆ ನಡೆಸಿ ತಕ್ಷಣ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಅವರು ಸೂಚಿಸಿದರು.



ಹಳೆ ಹೆಬ್ಬಾಳ ಗ್ರಾಮವನ್ನು ಸ್ಥಳಾಂತರಿಸುವ ಬಗ್ಗೆ ಗ್ರಾಮಸ್ಥರು ಸಚಿವರ ಮುಂದೆ ಬೇಡಿಕೆ ಇಟ್ಟಾಗ, ಗ್ರಾಮಸ್ಥರಿಗೆ ಸ್ಪಂದಿಸಿದ ಸಚಿವರು, ಮಳೆ ತುಸು ಕಡಿಮೆಯಾದ ನಂತರ ಗ್ರಾಮಕ್ಕೆ ಮತ್ತೆ ಭೇಟಿ ನೀಡಿ ಬೇಡಿಕೆ ಬಗ್ಗೆ ಕೂಲಂಕಷವಾಗಿ ಪರಿಶೀಲನೆ ನಡೆಸುವುದಾಗಿ ಭರವಸೆ ನೀಡಿದರು.

ಗ್ರಾಮದ ಸ್ಥಳಾಂತರಕ್ಕೆ ತಾವು ಮುಂದಾಗಿರುವುದಾಗಿ ಹೇಳಿದ ಸಚಿವರು, ಎಷ್ಟು ಕುಟುಂಬಗಳು ಸ್ಥಳಾಂತರಗೊಳ್ಳಬೇಕು ಎನ್ನುವ ಬಗ್ಗೆ ತೀರ್ಮಾನಿಸುವಂತೆ ಗ್ರಾಮಸ್ಥರಿಗೆ ಸಲಹೆ ನೀಡಿದರು.

ಈ ನಡುವೆ ಗ್ರಾಮಸ್ಥರೊಂದಿಗೆ ಗ್ರಾಮಸಭೆ ನಡೆಸುವಂತೆ ಸ್ಥಳದಲ್ಲಿದ್ದ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಹಾಗೂ ಎಸಿ ಸಾಹಿತ್ಯ ಅವರಿಗೆ ಸೂಚಿಸಿದರು.

ಗ್ರಾಮಸ್ಥರಿಗೆ ಬೇಕಾಗುವ ಸೌಲಭ್ಯ ಒದಗಿಸುವಂತೆ ಕಾಳಗಿ ತಹಸೀಲ್ದಾರ್ ಅವರಿಗೆ ಸೂಚಿಸಿದರು.

ನಿರಂತರ ಮಳೆಯಿಂದ ಬೆಣ್ಣೆತೊರ ಜಲಾಶಯದಿಂದ ನೀರು ಹರಿಬಿಟ್ಟಿದ್ದರಿಂದ ಹಳೆ ಹೆಬ್ಬಾಳ ಗ್ರಾಮಕ್ಕೆ ನೀರು ನುಗ್ಗಿದ್ದರಿಂದ ಗ್ರಾಮಸ್ಥರನ್ನು ತಾತ್ಕಾಲಿಕವಾಗಿ ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಿ ಊಟ, ವಸತಿ ವ್ಯವಸ್ಥೆ ಕಲ್ಪಿಸಲಾಗಿತ್ತು.

# ಉತ್ತರ ಕರ್ನಾಟಕದಲ್ಲಿ ಮಳೆ ಅಬ್ಬರ, ಜನ ಜೀವನ ತತ್ತರ

ಬೆಂಗಳೂರು: ರಾಜ್ಯದ ನಾನಾ ಕಡೆ ನಿರಂತರ ವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಅನೇಕ ಕಡೆ ಹಾನಿ ಸಂಭವಿಸಿದ್ದು, ಬಾಗಲಕೋಟೆಯಲ್ಲಿ ಮನೆಯ ಮೇಲ್ಛಾವಣಿ ಕುಸಿದು ಬಾಲಕನೊಬ್ಬ ಸಾವನ್ನಪ್ಪಿರುವ ಘಟನೆ ಸಂಭವಿಸಿದೆ. ಬಾಗಲಕೋಟೆ, ಬೀದರ್, ಕಲಬುರಗಿ, ಬೆಳಗಾವಿ, ವಿಜಯಪುರ, ಸೇರಿದಂತೆ ಕಲ್ಯಾಣ ಮತ್ತು ಕಿತ್ತೂರು ಕರ್ನಾಟಕ ಭಾಗದಲ್ಲಿ ಭಾರೀ ಮಳೆಯಿಂದಾಗಿ ಅಪಾರ ಪ್ರಮಾಣದ ಬೆಳೆ ನಷ್ಟವಾಗಿದ್ದು, ಜನಜೀವನ ಅಸ್ತವ್ಯಸ್ತವಾಗಿದೆ. ಕೆಲವು ಕಡೆ ಜಾನುವಾರುಗಳು ಕೊಚ್ಚಿಕೊಂಡು ಹೋಗಿವೆ.

ಈ ನಡುವೆ ಮಳೆಯಿಂದಾಗಿ ಸಂಕಷ್ಟಕ್ಕೊಳಗಾಗಿರುವ ಜನರಿಗೆ ತಕ್ಷಣವೇ ಪರಿಹಾರ ಒದಗಿಸಬೇಕೆಂದು ಸರ್ಕಾರ ಸೂಚಿಸಿದೆ. ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾಧಿಕಾರಿಗಳು, ತಹಸೀಲ್ದಾರ್ ಸೇರಿದಂತೆ ಇಡೀ ಜಿಲ್ಲಾಡಳಿತ ಸಮರೋಪಾದಿಯಲ್ಲಿ ಪರಿಹಾರ ಕಾರ್ಯದಲ್ಲಿ ತೊಡಗಿಸಿಕೊಳ್ಳುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ರಬಕವಿಬನಹಟ್ಟಿ ತಾಲೂಕಿನ ಮಹಾಲಿಂಗಪುರ ಪಟ್ಟಣದಲ್ಲಿ ನಿರಂತರ ಮಳೆಗೆ ಮನೆಯ ತಗಡಿನ ಮೇಲ್ಛಾವಣಿ ಹಾಗೂ ಗೋಡೆ ಕುಸಿದು ನಾಗಪ್ಪ ಲಾತೂರ್ ಮಗ ದರ್ಶನ್ ಲಾತೂರ್ (11) ಮೃತಪಟ್ಟಿದ್ದಾನೆ. ಬೆಳಗಿನ ಜಾವ 5 ಗಂಟೆಯ ಸುಮಾರಿಗೆ ಅವಘಡ ಸಭಂಭವಿಸಿದೆ. ಘಟನೆಯಲ್ಲಿ ಇನ್ನೊಬ್ಬ ಬಾಲಕ ಶ್ರೀಶೈಲ ಗಾಯಗೊಂಡಿದ್ದು, ಸ್ಥಳೀಯ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಕಲಬುರಗಿಯಲ್ಲಿ ಭಾರೀ ಮಳೆಯಿಂದ ಎಲ್ಲೆಡೆ ಪ್ರವಾಹ ಉಂಟಾಗಿದೆ. ಹಲವು ಸೇತುವೆಗಳು ಜಲಾವೃತಗೊಂಡಿವೆ. ಇದರಿಂದ ಗ್ರಾಮಗಳ ಸಂಪರ್ಕ ಕಡಿದುಕೊಂಡಿದ್ದು ಜನಜೀವನ ಅಸ್ತವ್ಯಸ್ತವಾಗಿದೆ.



ಜೇವರ್ಗಿ ಪಟ್ಟಣದ ಕಟ್ಟಿಸಂಗಾರಿ ಸೇತುವೆ ಮುಳುಗಡೆಯಾಗಿದೆ. ಎರಡು ದಿನ ನಿರಂತರ ಮಳೆಯಾಗುತ್ತಿರುವುದರಿಂದ ಕರ್ಜಾಖೇಡ ಗ್ರಾಮಕ್ಕೆ ನೀರು ನುಗ್ಗಿ ಅನೇಕ ಮನೆಗಳು ಜಲಾವೃತಗೊಂಡಿವೆ. ದೇವಸ್ಥಾನಕ್ಕೆ ಹಳ್ಳದ ನೀರು ಹರಿದ ಪರಿಣಾಮ ಜನರು ಪರದಾಡುವಂತಾಗಿದೆ. ತಾಲ್ಲೂಕಿನ ಯಂಕಂಚಿ ಗ್ರಾಮದ ಬಸವೇಶ್ವರ ಹಾಗೂ ಮಹಾಲಕ್ಷ್ಮಿ ದೇವಸ್ಥಾನಕ್ಕೂ ಪ್ರವಾಹದ ಭೀತಿ ಎದುರಾಗಿದೆ. ಸನ್ನತಿ ಬ್ಯಾರೇಜ್‌ನಿಂದ ಯಾದಗಿರಿ ಕಡೆ ಅಪಾರ ಪ್ರಮಾಣದ ನೀರು ಹರಿದುಬರುತ್ತಿದೆ. ಭೀಮಾನದಿ ಪ್ರವಾಹಕ್ಕೆ ರೈತರ ಬದುಕು ಅಕ್ಷರಶಃ ನಲುಗಿ ಹೋಗಿದೆ. ನಾಯ್ಕಲ್ ಗ್ರಾಮದಲ್ಲಿ ನೂರಾರು ಎಕರೆ ಬೆಳೆ ಹಾನಿಗೊಂಡಿವೆ. ಈ ಪ್ರದೇಶದ ಒಂದು ಕಿ.ಮೀ ಸುತ್ತ ನೀರು ನುಗ್ಗಿರುವುದರಿಂದ ಬೆಳೆದಿದ್ದ ಭತ್ತ, ಹತ್ತಿ ಬೆಳೆಗಳು ಮುಳುಗಡೆಯಾಗಿವೆ.

ಜಿಲ್ಲೆಯಾದ್ಯಂತ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಣೆ ಹಿನ್ನೆಲೆ ದಸರಾ ರಜೆ ನಡುವೆಯೂ ಕೆಲವು ಆಡಳಿತ ಮಂಡಳಿಯವರು ಶಾಲೆ ನಡೆಸುತ್ತಿದ್ದು, ಮಕ್ಕಳ ಹಿತದೃಷ್ಟಿಯಿಂದ ಸದರಿ ಶಾಲೆಗಳಿಗೆ ಇಂದು ಮತ್ತು ನಾಳೆ ರಜೆ ಘೋಷಿಸಿ ಡಿ.ಡಿ.ಪಿ.ಐ ಸೂರ್ಯಕಾಂತ ಮದಾನೆ ಆದೇಶ ಹೊರಡಿಸಿದ್ದಾರೆ. ಚಂದ್ರಂಪಳ್ಳಿ ಜಲಾಶಯಕ್ಕೆ 7,500 ಕ್ಯೂಸೆಕಗೂ ಅಧಿಕ ಒಳ ಹರಿವಿದ್ದು ಮೂರು ಗೇಟುಗಳನ್ನು ತಲಾ 10 ಅಡಿ ತೆರೆದು ನೀರು ಬಿಡಲಾಗಿದೆ. ಇದರಿಂದ ಚಂದ್ರಂಪಳ್ಳಿ ಕೂಡು ಸೇತುವೆ ಸಂಪೂರ್ಣ ಮುಳುಗಿದೆ. ಗ್ರಾಮ ಸಂಪರ್ಕ ಕಡಿದುಕೊಂಡಿದ್ದು ಗ್ರಾಮಸ್ಥರು ಜಾಗೃತರಾಗಿರಲು ಯೋಜನಾಧಿಕಾರಿ ಚೇತನ ಕಳಸ್ಕರ ಮನವಿ ಮಾಡಿದ್ದಾರೆ. ತಾಲ್ಲೂಕಿನಲ್ಲಿ ಇಂದು ಬೆಳಿಗ್ಗೆಯಿಂದಲೇ ಜೋರು ಮಳೆ ಸುರಿಯುತ್ತಿದ್ದು ಕುಂಭ ದ್ರೋಣ ಮಳೆಗೆ ಜನರು ತಲ್ಲಣಗೊಂಡಿದ್ದಾರೆ. ಚಂದಾಪುರ, ಗಾರಂಪಳ್ಳಿ, ಅಣವಾರ, ಕಲ್ಲೂರು, ಕನಕಪುರ ಸೇರಿದಂತೆ ವಿವಿಧೆಡೆ ಮನೆಗಳಿಗೆ ನೀರು ನುಗ್ಗಿದೆ.

ಬೀದರ್‌ನಲ್ಲೂ ವ್ಯಾಪಕವಾಗಿ ಮಳೆಯಾಗುತ್ತಿದ್ದು, ಜಿಲ್ಲೆಯಾದ್ಯಂತ ನದಿಗಳು, ಹಳ್ಳಕೊಳ್ಳಗಳು, ತೊರೆಗಳು ಉಕ್ಕಿ ಹರಿಯುತ್ತಿವೆ. ಮಹಾರಾಷ್ಟ್ರದ ಕರಾವಳಿ ಭಾಗದಲ್ಲಿ ಭಾರೀ ಮಳೆಯಾಗುತ್ತಿರುವುದರಿಂದ ಈ ಭಾಗದಲ್ಲಿ ನದಿಗಳಿಗೆ ವ್ಯಾಪಕ ಪ್ರಮಾಣದ ನೀರು ಹರಿದುಬಂದಿದೆ. ಕೆಲವು ಕಡೆ ಅಪಾಯದ ಮಟ್ಟ ಮೀರಿ ಹರಿಯುತ್ತಿರುವುದರಿಂದ ಜಿಲ್ಲಾಡಳಿತ ನದಿ ಪಕ್ಕದ ಜನರನ್ನು ಬಲವಂತವಾಗಿ ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ಬಿಟ್ಟೂ ಬಿಡದೆ ಸುರಿಯುತ್ತಿರುವ ಧಾರಾಕಾರ ಮಳೆಗೆ ಹುಲಸುರು, ಬೀದರ್ ತಾಲೂಕು, ಭಾಲ್ಕಿಯಲ್ಲಿ ಅವಾಂತರಗಳು ಸೃಷ್ಟಿಯಾಗಿವೆ. ಹುಲಸೂರು ತಾಲೂಕಿನ ಇಂಚುರು ಸೇತುವೆ ಮೇಲೆ ಅಪಾರ ಪ್ರಮಾಣದ ನೀರು ಹರಿದು ರಸ್ತೆ ಸಂಚಾರ ಬಂದಾಗಿದೆ. ಹುಲಸೂರು ಇಂದ ಭಾಲ್ಕಿ ರಸ್ತೆ ಸಂಚಾರ ಬಂದಾಗಿ ವಾಹನ ಸವಾರರು ಪರದಾಡುತ್ತಿದ್ದು ಬೀದರ್ ತಾಲೂಕಿನ ಚಿಲ್ಲರ್ಗಿ ಸೇತುವೆ ಮೇಲೆ ನೀರು ಹರಿದು ರಸ್ತೆ ಸಂಚಾರ ಬಂದಾಗಿದೆ. ಸೇತುವೆ ಮೇಲೆ ನೀರು ಹರಿದು ಪರಿಣಾಮ ರಸ್ತೆ ಸಂಚಾರ ಬಂದಾಗಿದ್ದು, ಚಿಲ್ಲರ್ಗಿ ಟು ಚಿಮಕೋಡ್, ಗಾದಗಿ ರಸ್ತೆ ಸಂಚಾರ ಬಂದಾಗಿದೆ. ರಸ್ತೆ ಸಂಚಾರ ಬಂದಾಗಿ ವಾಹನ ಸವಾರರು ಪರದಾಡುತ್ತಿದ್ದರೆ, ಕೆಲವರು ನೀರು ತುಂಬಿದ ರಸ್ತೆ ಮೇಲೆಯ ನಡೆದುಕೊಂಡು ಸೇತುವೆ ದಾಟುತ್ತಿದ್ದಾರೆ.

ಇನ್ನೂ ಕಮಲನಗರದ ಗ್ರಾಮವೊಂದರಲ್ಲಿ ರಸ್ತೆ ಮೇಲೆ ರಭಸವಾಗಿ ಹರಿಯುತ್ತಿರುವ ನೀರಿನಲ್ಲಿ ದಾಟಲು ಎಮೆಗಳು ಪರದಾಡಿವೆ. ಮಾಂಜ್ರಾನದಿಗೆ ಲಕ್ಷ ಲಕ್ಷ ಕ್ಯೂಸೆಕ್ ನೀರು ಬಿಡುಗಡೆ ಹಿನ್ನೆಲೆ ಜಿಲ್ಲೆಯಲ್ಲಿ ಪ್ರವಾಹ ಸ್ಥಿತಿ ನಿರ್ಮಾಣವಾಗಿದ್ದು, ಮಾಂಜ್ರಾನದಿ ದಡದಲ್ಲಿರುವ ಲಕ್ಷಾಂತರ ಎಕರೆ ಜಮೀನುಗಳಲ್ಲಿ ಬೆಳೆದಿದ್ದ ಬೆಳಗಳು ಸಂಪೂರ್ಣವಾಗಿ ಜಲಾವೃತವಾಗಿವೆ. ಧಾರಾಕಾರ ಮಳೆ ಹಾಗೂ ಮಾಂಜ್ರಾನದಿ ಎಫೆಕ್ಟ್ ಜಿಲ್ಲೆಯ ಜನ್ರ ಜೀವನ ಮೂರಾಬಟ್ಟೆಯಾಗಿದ್ದು ಇಂದು ಕೂಡಾ ಜಿಲ್ಲೆಯಲ್ಲಿ ಧಾರಾಕಾರ ಮಳೆ ಹಿನ್ನೆಲೆ ಯೆಲ್ಲೋ ಅಲರ್ಟ್ ಘೋಷಣೆಮಾಡಲಾಗಿದೆ. ವಿಜಯಪುರ ಜಿಲ್ಲೆಯಲ್ಲಿ ಭೀಮಾ ನದಿ ಪ್ರವಾಹದಿಂದ ಜನರು ತತ್ತರಿಸಿದ್ದಾರೆ. ಆಲಮೇಲ ತಾಲೂಕಿನ ತಾವರಖೇಡ ಗ್ರಾಮದಲ್ಲಿ ಭೀಮಾ ನದಿ ಪ್ರವಾಹದಿಂದ ಮನೆಗಳು ಜಲಾವೃತಗೊಂಡಿದೆ. ಪ್ರವಾಹ ಸ್ಥಿತಿಯ ನಡುವೆಯೂ ತೋಟದಲ್ಲಿ ಕುಟುಂಬಗಳು ವಾಸವಿದ್ದರು. ತೋಟದ ಮನೆಗಳಲ್ಲಿದ್ದ 8 ಜನರನ್ನು ಬೋಟ್ ಮೂಲಕ ಅಗ್ನಿಶಾಮಕ ದಳದ ಸಿಬ್ಬಂದಿ ರಕ್ಷಣೆ ಮಾಡಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.